ಕರ್ನಾಟಕ ಸರ್ಕಾರ
ತಾಂತ್ರಿಕ ಶಿಕ್ಷಣ ಇಲಾಖೆ

ಸಂಖ್ಯೆ: ಬಿಟಿಇ/163/ಇಸಿಎಸ್(3)/2018

ಕಾರ್ಯದರ್ಶಿಯವರ ಕಛೇರಿ
ತಾಂತ್ರಿಕ ಪರೀಕ್ಷಾ ಮಂಡಳಿ
ಅರಮನೆ ರಸ್ತೆ, ಬೆಂಗಳೂರು-01
ದಿನಾಂಕ: 11.06.2019.

**ಸುತ್ತೋಲೆ**

ವಿಷಯ : ಸಕಾಲ ಸೇವೆಗಳನ್ನು ಸೇವಾ ಸಿಂಧು ಯೋಜನೆಯ ವ್ಯಾಪ್ತಿಗೆ ಒಳಪಡಿಸುವ ಬಗ್ಗೆ.

ಉಲ್ಲೇಖ: ಈ ಕಛೇರಿ ಸುತ್ತೋಲೆ ಸಂಖ್ಯೆ: ಬಿಟಿಇ/163/ಇಸಿಎಸ್(3)/2018, ದಿನಾಂಕ: 09.04.2019.

*-*-*-*-*

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಉಲ್ಲೇಖದ ಸುತ್ತೋಲೆಯಲ್ಲಿ ಸರ್ಕಾರದ ಆದೇಶ ಸಂಖ್ಯೆ: ಇಡಿ 11 ಇಜಿಒವಿ ಬೆಂಗಳೂರು, ದಿನಾಂಕ: 07.03.2019 ರನ್ವಯ ತಾಂತ್ರಿಕ ಪರೀಕ್ಷಾ ಮಂಡಳಿಯ ಸಕಾಲ ಸೇವೆಗಳನ್ನು ಪಡೆಯಲು ಆನ್‌ಲೈನ್ ತಂತ್ರಾಂಶದ (ಸೇವಾ ಸಿಂಧು) ಮೂಲಕ ವಿದ್ಯಾರ್ಥಿಗಳು ಕಡ್ಡಾಯವಾಗಿ ಅರ್ಜಿ ಸಲ್ಲಿಸಬೇಕಾಗಿರುತ್ತದೆ ಎಂದು ತಿಳಿಸಲಾಗಿತ್ತು.

ಮುಂದುವರೆದು ವಿದ್ಯಾರ್ಥಿಗಳಿಂದ ಸೇವಾ ಸಿಂಧು ಮೂಲಕ ಸ್ವೀಕೃತವಾದ ಅರ್ಜಿಗಳನ್ನು ನಿಯಮಾನುಸಾರ ಪರಿಶೀಲಿಸಿ ಮುಂದಿನ ಸೂಕ್ತ ಕ್ರಮಕ್ಕಾಗಿ ಕಡ್ಡಾಯವಾಗಿ ತಾಂತ್ರಿಕ ಪರೀಕ್ಷಾ ಮಂಡಳಿಗೆ ಆನ್‌ಲೈನ್ ಮೂಲಕ ಕಳುಹಿಸಬೇಕಾಗಿರುತ್ತದೆ. ಆದರೆ ಕೆಲವು ಸಂಸ್ಥೆಗಳು ಸೇವಾ ಸಿಂದು ಮೂಲಕ ಸ್ವೀಕೃತವಾದ ಅರ್ಜಿಗಳನ್ನು ಮುಂದಿನ ಸೂಕ್ತ ಕ್ರಮಕ್ಕಾಗಿ ತಾಂತ್ರಿಕ ಪರೀಕ್ಷಾ ಮಂಡಳಿಗೆ ಕಳುಹಿಸದೇ ಇರುವುದು ಕಂಡುಬಂದಿರುತ್ತದೆ.

ಆದ್ದರಿಂದ ಇನ್ನುಮುಂದೆ ಸೇವಾ ಸಿಂಧು ಮೂಲಕ ತಮ್ಮ ಸಂಸ್ಥೆಯಲ್ಲಿ ಸ್ವೀಕೃವಾದ ಅರ್ಜಿಗಳನ್ನು ನಿಯಮಾನುಸಾರ ಪರಿಶೀಲಿಸಿ ತ್ವರಿತವಾಗಿ ಮುಂದಿನ ಕ್ರಮಕ್ಕಾಗಿ ಕಡ್ಡಾಯವಾಗಿ ತಾಂತ್ರಿಕ ಪರೀಕ್ಷಾ ಮಂಡಳಿಗೆ ಆನ್‌ಲೈನ್ ತಂತ್ರಾಂಶದ (ಸೇವಾ ಸಿಂಧು) ಮೂಲಕವೇ ಕಳುಹಿಸಲು ಮತ್ತೊಮ್ಮೆ ಸೂಚಿಸಲಾಗಿದೆ.

ತಪ್ಪಿದಲ್ಲಿ ಮುಂದಿನ ಆಗುಹೋಗುಗಳಿಗೆ ಸಂಸ್ಥೆಯ ಪ್ರಾಚಾರ್ಯರೇ ನೇರಹೊಣೆಗಾರರಾಗಿರುತ್ತಾರೆ ಎಂದು ತಿಳಿಸಲಾಗಿದೆ.

N. 11/06/19
ಕಾರ್ಯದರ್ಶಿ
ತಾಂತ್ರಿಕ ಪರೀಕ್ಷಾ ಮಂಡಳಿ

ಇವರಿಗೆ : ರಾಜ್ಯದ ಎಲ್ಲಾ ಸರ್ಕಾರಿ/ಅನುದಾನಿತ/ಖಾಸಗಿ ಪಾಲಿಟೆಕ್ನಿಕ್‌ಗಳ ಪ್ರಾಚಾರ್ಯರುಗಳಿಗೆ – ಮಾಹಿತಿಗಾಗಿ ಮತ್ತು ಮುಂದಿನ ಸೂಕ್ತ ಕ್ರಮಕ್ಕಾಗಿ.

ಪ್ರತಿ :

1. ಇ-ಆಡಳಿತ – ಅಂತರ್ಜಾಲದಲ್ಲಿ ಪ್ರಕಟಿಸಲು.
2. ಕಾರ್ಯದರ್ಶಿಯವರ ಆಪ್ತಶಾಖೆ, ತಾಂತ್ರಿಕ ಶಿಕ್ಷಣ ನಿರ್ದೇಶನಾಲಯ, ಬೆಂಗಳೂರು.
3. ತಾಂತ್ರಿಕ ಪರೀಕಾ ಮಂಡಳಿಯ ಎಲ್ಲಾ ಅಧಿಕಾರಿಗಳು/ಸಿಬ್ಬಂದಿ ವರ್ಗದವರ ಮಾಹಿತಿಗಾಗಿ ಮತ್ತು ಮುಂದಿನ ಕ್ರಮಕ್ಕಾಗಿ.